ಮೈಸೂರ ಗೆಜೆಟ್.

ನಂ. 11] ಸರ್ಕಾರದಿಂದ ಫಾಯಿಷ್ ಆದ್ದು. [1895.

ಬೆಂಗಳೂರು, ಗುರುವಾರ, ಮಾರ್ಚ್ ತಾ|| 28, ಸ|| 1895.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜೀರು ವಗೈರೀರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಇನಾಂ ಇಲಾಖಾ.

ಇಸ್ತಿಹಾರ್‌ನಾಮೆ.

ನಂ. 4. ತಾರೀಖು 8ನೇ ಮಾರ್ಚ್ ಸ|| 1895.

ಇನಾಂದಾರರಿಗೆ ಇದರಿಂದ ತಿಳಿಯಪಡಿಸುವದೇನಂದರೆ,—ಲೇಟ್ ಕಡಬ ಹಾಲಿ ಗುಬ್ಬಿ ತಾಲ್ಲೂಕಿನಲ್ಲಿ ಇರತಕ್ಕ ಚಿಲ್ಲರೆ ಇನಾಂಗಳ ಬಾಬತು (796) ಫೈನಲ್ ಟೈಟಲ್ ಡೀಡ್‌ಯಾನೆ ಕಾಯಂಪಟ್ಟೆಗಳನ್ನ ತುಮಕೂರು ಡಿಸ್ಟ್ರಿಕ್ಟು ಡಿಪ್ಯೂಟಿ ಕಮಿಷ್ಟ್ರಸನರ್ ಸಾಹೇಬರವರ ಬಳಿಗೆ ಬಟವಾಡೆ ಬಗ್ಗೆ ಈ ತಾರೀಖಿನಲ್ಲಿ ಕಳುಹಿಸಲ್ಪಟ್ಟಿವೆ.

2. ಸದರೀ ತಾಲ್ಲೂಕಿನ ಅಮಲ್‌ದಾರರಿಂದ ಪ್ರತ್ಯೇಕ ಪ್ರತ್ಯೇಕ ನೋಟಿಸು ಬಂದಮೇಲೆ ಅವುಗಳನ್ನ ತೆಗದುಕೊಳ್ಳುವ ಬಗ್ಗೆ ಸದರೀ ಇನಾಂದಾರ‍್ರು ಐರ್ಜ ಪ್ರಕಾರ ಹಾಜರಾಗತಕ್ಕದ್ದು. ಸದರೀ ತಾಲ್ಲೂಕಿನ ಅಮಲ್‌ದಾರ‍್ರು ಅಂಥಾ ನೋಟಿಸುಗಳನ್ನು ದೇರ್ ಮಾಡದೆ ಕಳುಹಿಸಿಕೊಡತಕ್ಕದ್ದೆಂದು ಇದರಿಂದ ನಿಯಮಿಸಲ್ಪಟ್ಟು ಇರುತ್ತಾರೆ.

3. ಸದರೀ ಚಿಲ್ಲರೆ ಇನಾಂಗಳ ಬಗ್ಗೆ ಈ ಆಫಿಸಿನಿಂದ ಮೊದಲೇ ಕೊಡಲ್ಪಟ್ಟ ಪಂಗ್ಯಾಮಿಾ ಪಟ್ಟೆಗಳು ರದ್ದು ಮಾಡಲ್ಪಟ್ಟು ಯಿರುತ್ತೆಂದು ಇದರ ದೆಕೆಯಿಂದ ಪ್ರಕಟಿಸಲ್ಪಡುತ್ತೆ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್ ಇನಾಂ ಸೆಟ್ಲ್‌ಮೆಂಟ್.